# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 828(988) |
| ಸದಸ್ಯರ ಹೆಸರು | : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 15.12.2025 |
| ಉತ್ತರಿಸುವವರು | : ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವ ಕೆಲವು ಅತಿಥಿ ಉಪನ್ಯಾಸಕರ ಪದವಿ ಪ್ರಮಾಣಪತ್ರಗಳು ನಕಲಿ ಹಾಗೂ ಅವುಗಳ ನೈಜತೆಯನ್ನು ದೃಢೀಕರಿಸಿರುವ ದಾಖಲೆಗಳು ಕೂಡ ನಕಲಿ ಎನ್ನುವ ವರದಿ ಉನ್ನತ ಶಿಕ್ಷಣ ಕ್ಷೇತ್ರದ ರೋಗಗ್ರಸ್ತ ಪರಿಸ್ಥಿತಿಯನ್ನು ಸೂಚಿಸುವಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ಆಯ್ಕೆಯಾಗುವ ಕೆಲವು ಅಭ್ಯರ್ಥಿಗಳು ನಕಲಿ ದಾಖಲೆಗಳನ್ನು ಸಲ್ಲಿಸುತ್ತಿರುವುದಾಗಿ ದೂರುಗಳು ಸ್ವೀಕೃತವಾಗುತ್ತಿದ್ದ ಹಿನ್ನೆಲೆಯಲ್ಲಿ, ಕರ್ತವ್ಯಕ್ಕೆ ಹಾಜರಾಗುವ ಅತಿಥಿ ಉಪನ್ಯಾಸಕ ಅಭ್ಯರ್ಥಿಗಳ ಸ್ನಾತಕೋತ್ತರ ಪದವಿ, ಎನ್ಇಟಿ, ಎಸ್ಎಲ್ಇಟಿ, ಕೆ-ಎಸ್ಇಟಿ, ಪಿಹೆಚ್.ಡಿ. ಎಂ.ಫಿಲ್ ಅಂಕಪಟ್ಟಿ/ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಂಬಂಧಪಟ್ಟ ವಿಶ್ವವಿದ್ಯಾಲಯದಿಂದ ಒಂದು ಬಾರಿಯ ಕ್ರಮವಾಗಿ ನೈಜತೆ ವರದಿಯನ್ನು ಪಡೆಯುವಂತೆ ಸಂಬಂದಿಸಿದ ಕಾಲೇಜಿನ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿರುತ್ತದೆ.<br><br>ಈ ರೀತಿ ಒಂದು ಬಾರಿ ನೈಜತೆ ವರದಿಯನ್ನು ಪಡೆದ ಅತಿಥಿ ಉಪನ್ಯಾಸಕರ ವಿದ್ಯಾರ್ಹತೆ ನೈಜತೆ ಕುರಿತು ಮುಂದಿನ ಆಯ್ಕೆ ಪ್ರಕ್ರಿಯೆಯಲ್ಲಿ/ಕರ್ತವ್ಯಕ್ಕೆ ಹಾಜರಾಗುವಾಗ ಮತ್ತೊಮ್ಮೆ ನೈಜತೆ ವರದಿ ಪಡೆಯುವ ಅವಶ್ಯಕತೆ ಇರುವುದಿಲ್ಲ ಎಂಬುದಾಗಿಯೂ, ಸ್ನಾತಕೋತ್ತರ ಪದವಿ, ಎನ್ಇಟಿ, ಎಸ್ಎಲ್ಇಟಿ, ಕೆ-ಎಸ್ಇಟಿ, ಪಿಹೆಚ್.ಡಿ. ಎಂ.ಫಿಲ್ ಅಂಕಪಟ್ಟಿ/ಪ್ರಮಾಣ ಪತ್ರಗಳ ಕುರಿತು ಸಂಬಂಧಪಟ್ಟ ವಿಶ್ವವಿದ್ಯಾಲಯದಿಂದ 'ನಕಲಿ'/'FAKE' ಎಂಬುದಾಗಿ ವರದಿ ಸ್ವೀಕೃತವಾದಲ್ಲಿ ಅಂತಹ ಅತಿಥಿ ಉಪನ್ಯಾಸಕರನ್ನು ಕೂಡಲೇ ಕರ್ತವ್ಯದಿಂದ ಬಿಡುಗಡೆಗೊಳಿಸಿ, ಅಂತಹ ಅತಿಥಿ ಉಪನ್ಯಾಸಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಸೂಚಿಸಲಾಗಿರುತ್ತದೆ. |
| (ಆ) | ಬಂದಿದ್ದಲ್ಲಿ ನಕಲಿ ಪ್ರಮಾಣಪತ್ರಗಳ ಹಾವಳಿಯನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮವೇನು; | |
| (ಇ) | ಪದವಿ ಪ್ರಮಾಣಪತ್ರಗಳ ನೈಜತೆಯನ್ನು ಪರೀಕ್ಷಿಸಲು ತಗಲುವ ವೆಚ್ಚವನ್ನು ಅತಿಥಿ ಉಪನ್ಯಾಸಕರೇ ಭರಿಸಬೇಕೆಂದು ಇಲಾಖೆ ಬಯಸುತ್ತಿರುವುದು ಆಡಳಿತಾತ್ಮಕವಾಗಿ ತಪ್ಪು ನಿರ್ಧಾರವಾಗಿರುವುದು ಮಾತ್ರವಲ್ಲದೇ, ತಪ್ಪು ಮಾಡಿರುವ ಅಭ್ಯರ್ಥಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವ ಅವಕಾಶವನ್ನು ಕೂಡ ಇಲಾಖೆ ಅನಗತ್ಯವಾಗಿ ಕೈ ಚೆಲ್ಲಿದ್ದಂತಾಗಿಲ್ಲವೆ; | ಅಭ್ಯರ್ಥಿಗಳು ಸಲ್ಲಿಸುವ ಅಂಕಪಟ್ಟಿ/ಶೈಕ್ಷಣಿಕ ಪ್ರಮಾಣ ಪತ್ರಗಳ ನೈಜತೆಯನ್ನು ಅವುಗಳನ್ನು ವಿತರಿಸಿದ ವಿಶ್ವವಿದ್ಯಾಲಯಗಳು/ಶೈಕ್ಷಣಿಕ ಪರೀಕ್ಷಾ ಮಂಡಳಿಗಳೊಂದಿಗೆ ಪರಿಶೀಲನೆ ನಡೆಸುವ ಸಂದರ್ಭದಲ್ಲಿ ತಗಲುವ ವೆಚ್ಚವನ್ನು ಆಯ್ಕೆಯಾದ ಅಭ್ಯರ್ಥಿಗಳಿಂದಲೇ ಭರಿಸುವಂತೆ ಸೂಚಿಸಲಾಗಿರುತ್ತದೆ. ಅದರನ್ವಯ ಅಭ್ಯರ್ಥಿಗಳು ಸಲ್ಲಿಸುವ ದಾಖಲೆಗಳ ನೈಜತೆ ವರದಿಗೆ ಸಂಬಂಧಿಸಿದ ಶುಲ್ಕದ ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಅಭ್ಯರ್ಥಿಗಳಿಂದಲೇ ಭರಿಸುವಂತೆ ತಿಳಿಸಲಾಗಿರುತ್ತದೆ. |

| | | |
|---|---|---|
| | | ಅಂಕಪಟ್ಟಿ/ಪ್ರಮಾಣ ಪತ್ರಗಳ ಕುರಿತು ಸಂಬಂಧಪಟ್ಟ ವಿಶ್ವವಿದ್ಯಾಲಯದಿಂದ 'ನಕಲಿ'/'FAKE' ಎಂಬುದಾಗಿ ವರದಿ ಸ್ವೀಕೃತವಾದಲ್ಲಿ ಅಂತಹ ಅತಿಥಿ ಉಪನ್ಯಾಸಕರನ್ನು ಕೂಡಲೇ ಕರ್ತವ್ಯದಿಂದ ಬಿಡುಗಡೆಗೊಳಿಸಿ, ಅಂತಹ ಅತಿಥಿ ಉಪನ್ಯಾಸಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಸೂಚಿಸಲಾಗಿರುತ್ತದೆ. |
| (ಈ) | ಉದ್ಯೋಗದ ಅಭದ್ರತೆಯಲ್ಲಿ ಬದುಕುತ್ತಿರುವ ಹಾಗೂ ಕಡಿಮೆ ಸಂಭಾವನೆಗೆ ದುಡಿಯುತ್ತಿರುವ ಅತಿಥಿ ಉಪನ್ಯಾಸಕರು ತಮ್ಮ ಪ್ರಮಾಣ ಪತ್ರಗಳ ನೈಜತೆಯನ್ನು ಸಾಬೀತುಪಡಿಸಲು ತಾವೇ ಖರ್ಚು ಮಾಡಬೇಕಾದ ಪರಿಸ್ಥಿತಿ ಸೃಷ್ಟಿಸಿರುವುದು ಮಾನವೀಯ ನಡವಳಿಕೆಯಲ್ಲ ಎಂಬ ಸತ್ಯವನ್ನು ಸರ್ಕಾರ ಗ್ರಹಿಸದಿರಲು ಕಾರಣಗಳೇನು; | ದಿನಾಂಕ:08.09.2020ರ ಸುತ್ತೋಲೆ ಸಂಖ್ಯೆ: ಸಿಆಸುಇ 10 ಸೇನೆನಿ 2019ರಲ್ಲಿ ಸರ್ಕಾರವು ನೀಡಿರುವ ಸೂಚನೆಯ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ಸಲ್ಲಿಸುವ ದಾಖಲೆಗಳ ನೈಜತೆ ವರದಿಗೆ ಸಂಬಂಧಿಸಿದ ಶುಲ್ಕದ ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಅಭ್ಯರ್ಥಿಗಳಿಂದಲೇ ಭರಿಸುವಂತೆ ಪ್ರಾಂಶುಪಾಲರಿಗೆ ತಿಳಿಸಲಾಗಿರುತ್ತದೆ. |
| (ಉ) | ಉನ್ನತ ಶಿಕ್ಷಣದಲ್ಲಿ ನಕಲಿ ಹಾವಳಿ ತಡೆಯುವುದು, ನಕಲಿ ಪ್ರಮಾಣ ಪತ್ರ ಮಾರಾಟ ಹಾಗೂ ವಿತರಣೆ ದಂಧೆಯನ್ನು ಕೊನೆಗೊಳಿಸುವುದು ಹಾಗೂ ಅವುಗಳನ್ನು ಬಳಸಿಕೊಂಡು ಸರ್ಕಾರಿ ಹಾಗೂ ಖಾಸಗಿ ವಲಯದಲ್ಲಿ ಈಗಾಗಲೇ ಅಕ್ರಮವಾಗಿ ಉದ್ಯೋಗ ಪಡೆದಿರುವವರ ವಿರುದ್ಧ ಆಂದೋಲನ ರೂಪದ ಕಾರ್ಯಾಚರಣೆಯನ್ನು ಹಮ್ಮಿಕೊಳ್ಳಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ? | ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಇಜಿಒವಿ 2018, ದಿನಾಂಕ:31.05.2019ರಲ್ಲಿ ನಕಲಿ ಅಂಕಪಟ್ಟಿ ಮತ್ತು ಪ್ರಮಾಣ ಪತ್ರಗಳ ಹಾವಳಿ ತಪ್ಪಿಸಿ, ಪರೀಕ್ಷಾ ಪದ್ಧತಿಯಲ್ಲಿ ಪಾರದರ್ಶಕತೆ ಹೆಚ್ಚಿಸಲು ಆಧಾರ್ ಸಂಖ್ಯೆ ಆಧಾರಿತ ಡಿಜಿಟಲ್ (e-sign) ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರಗಳನ್ನು ಆನ್‌ಲೈನ್ ಮೂಲಕ ವಿತರಿಸುವ ಯೋಜನೆ ಅನುಷ್ಠಾನಗೊಳಿಸಲಾಗಿದೆ.<br><br>ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಇಡಿ 23 ಯುಎನ್‌ಇ 2021, ದಿನಾಂಕ:26.02.2021ರಲ್ಲಿ ಯಾವುದಾದರೂ ಸಂಸ್ಥೆಯು ಯಾವುದೇ ರೀತಿಯ/ಅನಧಿಕೃತ ಪದವಿ/ಗೌರವ ಡಾಕ್ಟರೇಟ್ ಪದವಿಗಳನ್ನು ಪ್ರಧಾನ ಮಾಡುತ್ತಿರುವುದು/ಪ್ರಧಾನ ಮಾಡಲಿರುವುದು, ಮಾರಾಟ ಮಾಡುತ್ತಿರುವುದು ಕಂಡುಬಂದರೆ, ಅದಕ್ಕೆ ಕಾರಣಕರ್ತರಾದ ವ್ಯಕ್ತಿ/ಸಂಸ್ಥೆಯ ವಿರುದ್ಧ ಕೂಡಲೇ ಪೊಲೀಸ್ ಠಾಣೆಯಲ್ಲಿ ಪ್ರಥಮ ವರ್ತಮಾನ ವರದಿ ದಾಖಲಿಸಿ ಅಗತ್ಯಕ್ರಮ ಕೈಗೊಳ್ಳುವಂತೆ ಆದೇಶಿಸಲಾಗಿದೆ. |

**ಸಂಖ್ಯೆ:ಇಡಿ 438 ಡಿಸಿಇ 2025(ಇ)**

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು